ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2013–14ನೇ ಸಾಲಿನಲ್ಲಿ 2009–10ನೇ ಸಾಲಿನ ಕೇಂದ್ರ ಪುರಸ್ಕೃತ ಕಾರ್ಯಕ್ರಮವಾದ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ಬಿಡುಗಡೆಯಾದ ಕೇಂದ್ರ ಸರ್ಕಾರದ 2014–15ನೇ ಸಾಲಿಗೆ ಮರು ನವೀಕರಣಗೊಳಿಸಿ ಅನುದಾನವನ್ನು (Revalidate) ಮರು ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ : 1) ಸರ್ಕಾರಿ ಆದೇಶ ಸಂಖ್ಯೆ : ಗ್ರಾಅಪ 42 ಜೈಅಯೋ 2013 ದಿನಾಂಕ 24.03.2014
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿ.ಪಂ., ಹಾವೇರಿರವರ ಪತ್ರ ಸಂಖ್ಯೆ :ಹಾಜಿಪಂ/ಅಭಿ/ರಾಜೈಯೋ/ಅ.ಪು.ಮೌ/1/09–10/10.11/2013–14ದಿ. 07.04.2014

*****

ಪ್ರಸ್ತಾವನೆ :

2013–14ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ಕಾರ್ಯಕ್ರಮವಾದ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ಉಲ್ಲೇಖ (1)ರ ಸರ್ಕಾರಿ ಆದೇಶ ದಿನಾಂಕ 24.03.2014ರಲ್ಲಿ ಹಾವೇರಿ ಜಿಲ್ಲೆಗೆ ಸರ್ಕಾರದಿಂದ 2009–10 ಮತ್ತು 2010–11ನೇ ಸಾಲಿನ ಬಾಕಿ ಕೇಂದ್ರ ಸಹಾಯಧನ ಪಾವತಿಗಾಗಿ ಕ್ರಮವಾಗಿ ರೂ.9.78ಲಕ್ಷ ಮತ್ತು ರೂ.10.172ಲಕ್ಷಗಳಂತೆ ಒಟ್ಟು ರೂ.19.952ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಆದರೆ ಈ ಅನುದಾನವನ್ನು ಖಜಾನೆಯಿಂದ ಸೆಳೆದಿರುವುದಿಲ್ಲವೆಂದು ತಿಳಿಸಿ, ಸದರಿ ಅನುದಾನವನ್ನು 2014–15ನೇ ಸಾಲಿಗೆ ಮರು ಮೌಲೀಕರಣಗೊಳಿಸಲು ಉಲ್ಲೇಖ (2)ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿ.ಪಂ., ಹಾವೇರಿ ರವರು ಕೋರಿರುತ್ತಾರೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ/42/ಜೈಅಯೋ/2013(ಪಿ)ಬೆಂಗಳೂರು, ದಿನಾಂಕ 21.06.2014.**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, 2013–14ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ಜಿಲ್ಲಾ ಪಂಚಾಯಿತಿ ಹಾವೇರಿಯಲ್ಲಿ ಉಳಿದಿರುವ ಕೇಂದ್ರ ಸಹಾಯಧನ ರೂ.19.952ಲಕ್ಷಗಳನ್ನು 2014–15ನೇ ಸಾಲಿನ ಲೆಕ್ಕ ಶೀರ್ಷಿಕೆ 2810–60–196–6–01–463 (ಯೋಜನೆ) ಯಡಿ ಒದಗಿಸಿರುವ ರೂ.40.00ಲಕ್ಷಗಳಿಂದ ಅನುದಾನವನ್ನು ಬಿಡುಗಡೆ ಮಾಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅ.ಟಿ. ಸಂಖ್ಯೆ: ಆ.ಇ./175ವೆಚ್ಚ–6/2014 ದಿನಾಂಕ 19.06.2014ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

21/6/14

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು (ಗ್ರಾಮೂಸೌ–2) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾ), ರವರ ಆಪ್ತ ಕಾರ್ಯದರ್ಶಿಗಳಿಗೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾವೇರಿ ಜಿಲ್ಲೆ.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ಉಪ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಸೆಕೆಂಡ್ ಫ್ಲೋರ್, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
7. ರಕ್ಷ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.